ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 588

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್(ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

ಉತ್ತರಿಸುವ ದಿನಾಂಕ : 17.12.2021.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಕಳೆದ 3 ತಿಂಗಳಿಂದ ಮಳೆ ಅವಾಂತರದಿಂದ ಹಾನಿಯಾಗಿರುವ ಬೆಳೆಗಳಾವುವು;(ವಿವರ ನೀಡುವುದು	ರಾಜ್ಯದಲ್ಲಿ ಕಳೆದ 3 ತಿಂಗಳಿಂದ ಮಳೆ ಅವಾಂತರದಿಂದ ಈರುಳ್ಳಿ, ಟೊಮ್ಯಾಟೋ, ಮೆಣಸಿನಕಾಯಿ, ಎಲೆಕೋಸ್, ಹೂಕೋಸ್, ಆಲೂಗಡ್ಡೆ, ಇತರೆ ತರಕಾರಿಗಳು, ಬಾಳೆ, ದಾಳಿಂಬೆ, ಪಪ್ಪಾಯ, ದ್ರಾಕ್ಷಿ, ಕರಿಮೆಣಸು, ಅಡಿಕೆ, ಶುಂಠಿ, ಹೂವುಗಳು ಮತ್ತು ಇತ್ಯಾದಿ ತೋಟಗಾರಿಕೆ ಬೆಳೆಗಳು ಹಾನಿಯಾಗಿರುತ್ತವೆ.
ಆ)	ಕೆಂಗೆಟ್ಟಿರುವ ತೋಟಗಾರಿಕೆ ಬೆಳೆಗಾರರಿಗೆ ಸರ್ಕಾರದಿಂದ ನೀಡಿರುವ ಪರಿಹಾರ ಏನು; ಯಾವ · ಆಧಾರದಲ್ಲಿ ನೀಡಲಾಗಿದೆ? (ವಿವರ ನೀಡುವುದು)	ಕೆಂಗೆಟ್ಟಿರುವ ತೋಟಗಾರಿಕೆ ಬೆಳೆಗಾರರಿಗೆ ರಾಷ್ಟ್ರೀಯ/ರಾಜ್ಯ ವಿಪತ್ತು ಪರಿಹಾರ ನಿಧಿ(NDRF/SDRF) ಮಾರ್ಗಸೂಚಿಯನ್ವಯ ಪ್ರತಿ ಹೆಕ್ಟೇರ್ ವಾರ್ಷಿಕ ಮಳೆಯಾಶ್ರಿತ ಬೆಳೆಗಳಿಗೆ ರೂ.13500 ಪ್ರತಿ ಹೆ. ಮತ್ತು ಬಹುವಾರ್ಷಿಕ ಬೆಳೆಗಳಿಗೆ ರೂ.18000 ಪ್ರತಿ ಹೆ. ರಂತೆ ಪ್ರತಿ ಫಲಾನುಭವಿಗೆ ಗರಿಷ್ಠ 2.00 ಹೆಕ್ಟೇರ್ ವರೆಗೆ ಕಂದಾಯ ಇಲಾಖೆ ಮುಖಾಂತರ ಪರಿಹಾರಧನ ವಿತರಿಸಲಾಗುತ್ತಿದೆ. ಕಳೆದ 3 ತಿಂಗಳಿಂದ ಮಳೆ ಅವಾಂತರದಿಂದ ಉಂಟಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಈವರೆಗೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳು ಸೇರಿದಂತೆ ಒಟ್ಟಾರೆ 444112 ಸಂ. ಫಲಾನುಭವಿಗಳಿಗೆ ಕಂದಾಯ ಇಲಾಖೆಯ ಮುಖಾಂತರ ರೂ.413.09 ಕೋಟಿ ಸಹಾಯಧನ ಪಾವತಿಸಲಾಗಿರುತ್ತದೆ.

HORTI 539 HGM 2021

(ಮುನಿರತ್ನ)

ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ

ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.